# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ, ಮಾನ್ವಿ ಇಲ್ಲಿ ಕುಡಿಯುವ ನೀರಿನ ಯೋಜನೆಗಳ ಕಾಮಗಾರಿಗಳಲ್ಲಿ ಶ್ರೀ ಜಿ.ಎನ್.ಪ್ರಕಾಶ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರು ಕಾಮಗಾರಿ ಸ್ಥಳ ಬದಲಾವಣೆ ಹಾಗೂ ನಿಗದಿತ ಮೊತ್ತಕ್ಕಿಂತ ಹೆಚ್ಚುವರಿ ಹಣ ವೆಚ್ಚ ಮಾಡಿ ಎಸಗಿರುವ ಕರ್ತವ್ಯಲೋಪ ಹಾಗೂ ದುರ್ನಡತೆಗೆ ಸಂಬಂಧಿಸಿದಂತೆ ಸೇವೆಯಿಂದ ಅಮಾನತ್ತು ಪಡಿಸುವ ಬಗ್ಗೆ - ಆದೇಶ.

ಓದಲಾಗಿದೆ: ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ರಾಯಚೂರು ಇವರ ಪತ್ರ ಸಂಖ್ಯೆ:ಜಿಪರಾ/ಸಿ-1/ಬ.ಗ್ರಾ.ಕು.ನೀ/ಶಿಸ್ತುಕ್ರಮ/2014-115, ದಿನಾಂಕ:9.3.2015

ಪ್ರಸ್ತಾವನೆ:-

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ರಾಯಚೂರು ರವರು ಮೇಲೆ ಓದಲಾದ ದಿನಾಂಕ 09.3.2015ರ ಪತ್ರದಲ್ಲಿ ಶ್ರೀ ಜಿ.ಎನ್.ಪ್ರಕಾಶ್, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂ.ರಾ.ಇಂ. ಉಪ ವಿಭಾಗ, ಮಾನ್ವಿ ಇವರು ಕಲ್ಲೂರು ಹಾಗೂ ಇತರೆ 10 ಗ್ರಾಮಗಳಿಗೆ ಕುಡಿಯುವ ನೀರಿನ ಯೋಜನೆಯ ಕಾಮಗಾರಿಗಳಿಗೆ ಸಂಬಂಧಿಸಿದ ಸಾಮಗ್ರಿಗಳನ್ನು ಮತ್ತು ಅನುದಾನವನ್ನು ಮೇಲಾಧಿಕಾರಿಗಳ ಅನುಮತಿ ಇಲ್ಲದೆ ಅತ್ತನೂರು ಗ್ರಾಮದ ಕುಡಿಯುವ ನೀರಿನ ಯೋಜನೆಗೆ ಬಳಸಿರುತ್ತಾರೆಂದು, ಅತ್ತನೂರು ಐಆರ್ ಯೋಜನೆಗೆ ಅಗತ್ಯ ಇರುವ ಸ್ಥಳವನ್ನು ರೈತರಿಂದ ನೊಂದಣಿ ಮಾಡಿಸಿಕೊಳ್ಳದೇ ಹಾಗೂ ಗುರುತಿಸಿದ ಜಮೀನನ್ನು ಭೂಸ್ವಾಧೀನಪಡಿಸಿಕೊಳ್ಳದೆ, ಭೂ ಮಾಲೀಕರಿಗೆ ಪರಿಹಾರ ನೀಡದೆ ಕಾಮಗಾರಿ ನಿರ್ವಹಿಸಿ, ರೂ. 4,16,53,986/- ಗಳ ಮೊತ್ತದ ಬಿಲ್ಲನ್ನು ಗುತ್ತಿಗೆದಾರರಿಗೆ ಪಾವತಿಸಿದ್ದು, ಇದರಿಂದಾಗಿ ಕಾಮಗಾರಿಯು 2009 ರಲ್ಲಿ ಅನುಮೋದನೆಗೊಂಡಿದ್ದರೂ ಕಾಮಗಾರಿ ಪೂರ್ಣಗೊಳಿಸದೇ ಕುಡಿಯುವ ನೀರನ್ನು ಒದಗಿಸುವ ಕಾರ್ಯ ಸ್ಥಗಿತಗೊಳ್ಳಲು ಕಾರಣವಾಗಿದ್ದಾರೆಂದು, ಈ ರೀತಿಯ ಹಣ ದುರುಪಯೋಗ ಮತ್ತು ಕರ್ತವ್ಯಲೋಪವೆಸಗಿದ ಶ್ರೀ ಜಿ.ಎನ್.ಪ್ರಕಾಶ್, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರನ್ನು ಸೇವೆಯಿಂದ ಅಮಾನತ್ತುಗೊಳಿಸಲು ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಇವರ ಪತ್ರವನ್ನು ಪರಿಶೀಲಿಸಿರುತ್ತದೆ. ಶ್ರೀ ಜಿ.ಎನ್.ಪ್ರಕಾಶ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ, ಮಾನ್ವಿ (ಪ್ರಸ್ತುತ, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ, ರಾಯಚೂರು) ಇವರ ಕಾರ್ಯವಧಿಯಲ್ಲಿ ಕಲ್ಲೂರು ಮತ್ತು ಅತ್ತನೂರು ಗ್ರಾಮಗಳಿಗೆ ಪ್ರತ್ಯೇಕವಾಗಿ ಎರಡು ಕುಡಿಯುವ ನೀರಿನ ಯೋಜನೆಗಳು ಮಂಜೂರಾಗಿದ್ದು, ಅತ್ತನೂರು ಗ್ರಾಮದ ಕುಡಿಯುವ ನೀರಿನ ಯೋಜನೆಗೆ ರೂ. 3,46,82,983/- ಗಳನ್ನು ನಿಗಧಿಪಡಿಸಲಾಗಿರುತ್ತದೆ. ಒಬ್ಬ ಜವಬ್ದಾರಿಯುತ ಅಧಿಕಾರಿಯಾದ ಶ್ರೀ ಜಿ.ಎನ್.ಪ್ರಕಾಶ ಇವರು ಅತ್ತನೂರು ಗ್ರಾಮದ ಕುಡಿಯುವ ನೀರಿನ ಯೋಜನೆ ಕಾಮಗಾರಿಯ ನಿರ್ವಹಣೆಗೆ ಅಗತ್ಯವಾದ ಭೂಮಿಯನ್ನು ಸ್ವಾಧೀನ ಪಡಿಸದೇ ಕಾಮಗಾರಿಯನ್ನು ನಿರ್ವಹಿಸಿ, ಗುತ್ತಿಗೆದಾರರಿಗೆ ರೂ. 4,16,53,986/- ಗಳನ್ನು ಪಾವತಿಸಿರುವುದಲ್ಲದೆ ಕಲ್ಲೂರು ಗ್ರಾಮದ ಕುಡಿಯುವ ನೀರಿನ ಯೋಜನೆಯ ಹಣವನ್ನು

----2

ಅನಧಿಕೃತವಾಗಿ ವೆಚ್ಚ ಮಾಡಿರುವುದು, ಕಾಮಗಾರಿಯು 2009ರಲ್ಲೇ ಅನುಮೋದನೆಗೊಂಡಿದ್ದರೂ ಭೂಸ್ವಾಧೀನ ಪ್ರಕ್ರಿಯೆಯನ್ನು ಪೂರ್ಣಗೊಳಿಸದೆ ಇರುವುದರಿಂದ 11 ಗ್ರಾಮಗಳಿಗೆ ಶುದ್ಧ ಕುಡಿಯುವ ನೀರನ್ನು ಒದಗಿಸುವ ಮಹತ್ವದ ಕಾಮಗಾರಿ ಸ್ಥಗಿತಗೊಳ್ಳಲು ಕಾರಣರಾಗಿದ್ದಾರೆಂದು ಕಂಡುಬರುತ್ತದೆ. ಅಲ್ಲದೆ ಅತ್ತನೂರು ಗ್ರಾಮದ ಕುಡಿಯುವ ನೀರಿನ ಕಾಮಗಾರಿಗೆ ನಿಗಧಿಪಡಿಸಿದ ಅನುದಾನಕ್ಕಿಂತ ಹೆಚ್ಚುವರಿಯಾಗಿ ಅನುದಾನವನ್ನು ವೆಚ್ಚ ಮಾಡುವ ಮೂಲಕ ತೀವ್ರತರವಾದ ಕರ್ತವ್ಯಲೋಪ ಮತ್ತು ದುರ್ನಡತೆ ಎಸಗಿ ಹಣ ದುರುಪಯೋಗಕ್ಕೆ ಕಾರಣರಾಗಿ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು, 1966ರ ನಿಯಮ 3(1)ನ್ನು ಉಲ್ಲಂಘಿಸಿರುವುದು ಮೇಲ್ನೋಟಕ್ಕೆ ಕಂಡು ಬರುತ್ತದೆ.

ಆದ್ದರಿಂದ ಶ್ರೀ ಜಿ.ಎನ್.ಪ್ರಕಾಶ್, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ, ಮಾನ್ವಿ ಇವರ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ ಇಲಾಖಾ ವಿಚಾರಣೆಯನ್ನು ಬಾಕಿ ಇರಿಸಿ, ಅವರನ್ನು ಸೇವೆಯಿಂದ ಅಮಾನತ್ತುಗೊಳಿಸಲು ಸರ್ಕಾರವು ತೀರ್ಮಾನಿಸಿರುತ್ತದೆ. ಆದ್ದರಿಂದ ಈ ಆದೇಶ.

**ಆದೇಶ ಸಂಖ್ಯೆ:ಗ್ರಾಅಪ 33 ಇಎನ್‌ಕ್ಯೂ 15 ಬೆಂಗಳೂರು, ದಿನಾಂಕ:17.03.2015.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರವು ಶ್ರೀ ಜಿ.ಎನ್.ಪ್ರಕಾಶ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ, ಮಾನ್ವಿ (ಪ್ರಸ್ತುತ, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ, ರಾಯಚೂರು) ಇವರು ಅತ್ತನೂರು ಗ್ರಾಅಮ ಕುಡಿಯುವ ನೀರಿನ ಕಾಮಗಾರಿಯ ಅನುಷ್ಠಾನದಲ್ಲಿ ಕರ್ತವ್ಯಲೋಪ ಮತ್ತು ದುರ್ನಡತೆ ಎಸಗಿ ಹಣ ದುರುಪಯೋಗಕ್ಕೆ ಕಾರಣರಾಗಿರುವುದು ಮೇಲ್ನೋಟಕ್ಕೆ ಕಂಡು ಬಂದಿರುವ ಕಾರಣ ಇವರನ್ನು ಕರ್ನಾಟಕ ನಾಗರೀಕ ಸೇವಾ (ವ.ನಿ.ಮೇ) ನಿಯಮಗಳು, 1957ರ ನಿಯಮ 10(1)(ಡಿ) ಅನುಸಾರ ಸದರಿಯವರ ವಿರುದ್ಧದ ಆರೋಪಗಳ ಬಗೆಗಿನ ಇಲಾಖಾ ವಿಚಾರಣೆಯನ್ನು ಬಾಕಿ ಇರಿಸಿ, ತಕ್ಷಣದಿಂದ ಜಾರಿಗೆ ಬರುವಂತೆ ಸೇವೆಯಿಂದ ಅಮಾನತ್ತುಪಡಿಸಿದೆ.

ಅಮಾನತ್ತು ಅವಧಿಯಲ್ಲಿ ಸದರಿಯವರು ನಿಯಮಾನುಸಾರ ಜೀವನಾಧರ ಭತ್ಯೆಯನ್ನು ಪಡೆಯಲು ಅರ್ಹರಿರುತ್ತಾರೆ. ಸಕ್ಷಮ ಪ್ರಾಧಿಕಾರದ ಅನುಮೋದನೆಯಿಲ್ಲದೆ ಕೇಂದ್ರ ಸ್ಥಾನವನ್ನು ಬಿಡತಕ್ಕದಲ್ಲ.

ಶ್ರೀ ಜಿ.ಎನ್.ಪ್ರಕಾಶ, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಇವರ (ಲೀನ್) ಹುದ್ದೆಯ ಹಕ್ಕನ್ನು ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು ಇಲ್ಲಿಗೆ ವರ್ಗಾಯಿಸಿದೆ.

ಕರ್ನಾಟಕ ರಾಜ್ಯ ಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಸಿದ್ದೇಶ ಪೋತಲಕಟ್ಟಿ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು,(ಎ ಮತ್ತು ಇ,) ಬೆಂಗಳೂರು.

2. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
3. ಮುಖ್ಯ ಇಂಜಿನಿಯರ್, ಗ್ರಾಮೀಣಾ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಬೆಂಗಳೂರು
4. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು(ದಕ್ಷಿಣ) ಕೆ.ಆರ್.ಸರ್ಕಲ್ ಬೆಂಗಳೂರು.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ರಾಯಚೂರು
6. ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ರಾಯಚೂರು
7. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ,
8. ಸಂಬಂಧಿಸಿದ ಅಧಿಕಾರಿಗೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ರಾಯಚೂರು ಇವರ ಮುಖಾಂತರ).
9. ಮಾನ್ಯ ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರು,
10. ಅಪರ ಮುಖ್ಯ ಕಾರ್ಯದರ್ಶಿಯವರು/ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು.
11. ಜಂಟಿ ಕಾರ್ಯದರ್ಶಿಯವರ ಆಪ್ತ ಸಹಾಯಕರು.
12. **ಶಾಖಾ ರಕ್ಷಾ ಕಡತ, ಹೆಚ್ಚುವರಿ ಪ್ರತಿ, ಕಂಪ್ಯೂಟರ್ ಸೆಲ್**